# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1043
ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 24.02.2023

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಳೆದ ಮೂರು ವರ್ಷಗಳಲ್ಲಿ ಬಿಎಂಟಿಸಿ ಬಸ್ ಅಪಘಾತಗಳಿಂದ ಸಂಭವಿಸಿದ ಸಾವುಗಳ ಸಂಖ್ಯೆ ಎಷ್ಟು. (ವಿವರಗಳನ್ನು ಒದಗಿಸುವುದು) | ಬೆಂ.ಮ.ಸಾ.ಸಂಸ್ಥೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿರುವ ಅಪಘಾತಗಳು ಹಾಗೂ ಮರಣಗಳ ಸಂಖ್ಯೆಯ ಮಾಹಿತಿ ಈ ಕೆಳಕಂಡಂತಿದೆ: (ಕೋಷ್ಟಕ 1 ನೋಡಿ) |
| ಆ. | ಅಪಘಾತಗಳ ಸಂಭವಕ್ಕೆ ಕಾರಣಗಳೇನು? | ಅಪಘಾತ ಪ್ರಕರಣಗಳಲ್ಲಿ ಇತರೆ ವಾಹನ ಸವಾರರು, ಪಾದಚಾರಿಗಳು, ಸೈಕಲ್ ಸವಾರರು ಹಾಗೂ ರಸ್ತೆಯ ಸ್ಥಿತಿಯೂ ಸೇರಿದಂತೆ ಇನ್ನಿತರ ಸವಾರರ ಅತಿವೇಗ ಹಾಗೂ ಅಜಾಗರೂಕತೆ ಅಪಘಾತಗಳು ಸಂಭವಿಸಲು ಕಾರಣವಾಗಿರುತ್ತವೆ. |
| ಇ. | ಅಪಘಾತದಿಂದ ಸಾವಿಗೀಡಾದ ಕುಟುಂಬದವರಿಗೆ ನೀಡಲಾದ ಪರಿಹಾರದ ಮೊತ್ತವೆಷ್ಟು? | ಕಳೆದ ಮೂರು ವರ್ಷಗಳಲ್ಲಿ ಸಂಸ್ಥೆಯ ವತಿಯಿಂದ ಪಾವತಿಸಿರುವ ಒಟ್ಟು ಪರಿಹಾರದ ವಿವರ ಈ ಕೆಳಕಂಡಂತಿದೆ: (ಕೋಷ್ಟಕ 2 ನೋಡಿ) |
| ಈ. | ಪದೇ ಪದೇ ಸಂಭವಿಸುತ್ತಿರುವ ಅಪಘಾತಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸಂಸ್ಥೆಯ ವಾಹನಗಳಿಂದ ಉಂಟಾಗುವ ಅಪಘಾತಗಳನ್ನು ನಿಯಂತ್ರಿಸಲು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳ ವಿವರಗಳನ್ನು **'ಅನುಬಂಧ'**ದಲ್ಲಿ ನೀಡಲಾಗಿದೆ. |

ಕೋಷ್ಟಕ 1 (ಅ.):

| ಕ್ರ. ಸಂ. | ವರ್ಷ | ಅಪಘಾತಗಳ ಸಂಖ್ಯೆ | ಮರಣ |
|---|---|---|---|
| 1 | 2019-20 | 224 | 51 |
| 2 | 2020-21 | 98 | 22 |
| 3 | 2021-22 | 133 | 38 |
| | **ಒಟ್ಟು** | **455** | **111** |

ಕೋಷ್ಟಕ 2 (ಇ.):

| ಕ್ರ. ಸಂ | ವರ್ಷ | ಒಟ್ಟು (ರೂ.ಗಳಲ್ಲಿ) |
|---|---|---|
| 1 | 2019-20 | 10,28,51,592 |
| 2 | 2020-21 | 15,95,61,344 |
| 3 | 2021-22 | 9,92,44,051 |
| | **ಒಟ್ಟು** | **36,16,56,987** |

ಸಂಖ್ಯೆ: ಟಿಡಿ 64 ಟಿಸಿಕ್ಯೂ 2023

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

## ಅನುಬಂಧ

**ಸಂಸ್ಥೆಯ ವಾಹನಗಳಿಂದ ಉಂಟಾಗುವ ಅಪಘಾತಗಳನ್ನು ನಿಯಂತ್ರಿಸಲು ಈ ಕೆಳಕಂಡ ಮುಂಜಾಗ್ರುತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:**

- ಸಂಸ್ಥೆಯ ತರಬೇತಿ ಕೇಂದ್ರದಲ್ಲಿ ಚಾಲನಾ ಸಿಬ್ಬಂದಿಗಳಿಗೆ ಸುರಕ್ಷತಾ ಚಾಲನೆ ಕುರಿತು ತರಬೇತಿಯನ್ನು ನೀಡಲಾಗುತ್ತಿದೆ.
- ಅಪಘಾತದಲ್ಲಿ ಭಾಗಿಯಾಗಿರುವ ಚಾಲನಾ ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ಸಂಸ್ಥೆಯ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗುತ್ತಿದೆ.
- ಸಂಚಾರ ನಿಯಮಗಳ ಪಾಲನೆ ಹಾಗೂ ಪಥ ನಿಯಮ ಪಾಲಿಸಿ ವಾಹನಗಳ ನಡುವೆ ಸುರಕ್ಷಿತ ಅಂತರ ಕಾಯ್ದುಕೊಂಡು ಎಚ್ಚರಿಕೆಯಿಂದ ವಾಹನ ಚಾಲನೆ ಮಾಡಲು ಚಾಲನಾ ಸಿಬ್ಬಂದಿಗಳಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಚಾಲನಾ ಸಿಬ್ಬಂದಿಗಳು ಪ್ರಯಾಣಿಕರೊಂದಿಗೆ ಮತ್ತು ಸಹ ವಾಹನ ಸವಾರರೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ಅರಿವು ಮೂಡಿಸಲಾಗುತ್ತಿದೆ.
- ಘಟಕ, ಕಾರ್ಯಗಾರ ಹಾಗೂ ಪ್ರಮುಖ ಬಸ್ ನಿಲ್ದಾಣ/ಟಿ.ಟಿ.ಎಂ.ಸಿಗಳಲ್ಲಿ ಅಪಘಾತದ ಕುರಿತು ಬೀದಿ ನಾಟಕಗಳನ್ನು ಆಯೋಜಿಸುವ ಮೂಲಕ ಚಾಲನಾ ಸಿಬ್ಬಂದಿ ಹಾಗೂ ಸಾರ್ವಜನಿಕ ಪ್ರಯಾಣಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಒಟ್ಟು ಇಲ್ಲಿಯವರೆಗೆ 65 ನಾಟಕ ಪ್ರದರ್ಶನಗಳನ್ನು ಆಯೋಜಿಸಲಾಗಿದೆ.
- ಸಂಸ್ಥೆಯ ಅಧಿಕಾರಿಗಳು ಮತ್ತು ಸಂಚಾರ ಪೋಲೀಸ್ ಇಲಾಖೆಯ ಸಹಯೋಗದೊಂದಿಗೆ ಘಟಕಗಳಲ್ಲಿ ಸುರಕ್ಷತಾ ಚಾಲನೆಯ ಬಗ್ಗೆ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗುತ್ತಿದೆ.
- ಸಂಸ್ಥೆಯಲ್ಲಿ ಪ್ರತಿ ವರ್ಷ ರಸ್ತೆ ಸುರಕ್ಷತಾ ಸಪ್ತಾಹವನ್ನು ಆಯೋಜಿಸಿ, ಚಾಲನಾ ಸಿಬ್ಬಂದಿಗಳಿಗೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಅಪಘಾತಗಳಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಹಾಗೂ ಸುರಕ್ಷತಾ ಕ್ರಮಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಸಂಸ್ಥೆಯ ಸಾರಥಿ ಗಸ್ತು ಪಡೆಯ ವಾಹನಗಳ ಮೂಲಕ ಮಾರ್ಗದ ಮೇಲೆ ಚಾಲನಾ ಸಿಬ್ಬಂದಿಗಳು ಸಂಚಾರ ನಿಯಮ ಉಲ್ಲಂಘಿಸದಂತೆ ಸೂಕ್ತ ಮೇಲ್ವಿಚಾರಣೆ ಮಾಡಲಾಗುತ್ತಿದೆ ಹಾಗೂ ತಪ್ಪಿತಸ್ಥ ಚಾಲಕರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ.
- ಘಟಕಗಳಲ್ಲಿ ಚಾಲನಾ ಸಿಬ್ಬಂದಿಗಳಿಗೆ ಆಸ್ಪತ್ರೆಗಳ ಸಹಯೋಗದೊಂದಿಗೆ ಕಣ್ಣಿನ ಪರೀಕ್ಷೆಯ ಕಾರ್ಯಾಗಾರಗಳನ್ನು ಆಯೋಜಿಸಲಾಗುತ್ತಿದೆ. ಹಾಗೂ ಸಂಸ್ಥೆಯು ಖಾಸಗಿ ಆಸ್ಪತ್ರೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದು ಕಾಲಕಾಲಕ್ಕೆ ಚಾಲನಾ ಸಿಬ್ಬಂದಿಗಳ ಆರೋಗ್ಯ ತಪಾಸಣೆಗೆ ಅವಕಾಶವನ್ನು ಕಲ್ಪಿಸಲಾಗಿದೆ.
- ಜಯದೇವ ಹೃದ್ರೋಗ ಆಸ್ಪತ್ರೆಯೊಂದಿಗೆ ಸಂಸ್ಥೆಯು ಒಡಂಬಡಿಕೆ ಮಾಡಿಕೊಂಡಿದ್ದು, 45 ವರ್ಷ ಮೇಲ್ಪಟ್ಟ ಸಿಬ್ಬಂದಿಗಳಿಗೆ ಹೃದ್ರೋಗ ತಪಾಸಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.
- ಅಪಘಾತ ರಹಿತ ಚಾಲನೆಗಾಗಿ ಚಾಲಕರಿಗೆ ಬೆಳ್ಳಿ ಪದಕ ಮತ್ತು ಚಿನ್ನದ ಪದಕ, ನಗದು ಪುರಸ್ಕಾರ ಹಾಗೂ ಪ್ರಶಂಸನಾ ಪತ್ರಗಳನ್ನು ನೀಡಿ ಗೌರವಿಸಲಾಗುತ್ತಿದೆ ಹಾಗೂ ಚಿನ್ನ/ಬೆಳ್ಳಿ ಪದಕ ಪಡೆದ ಚಾಲನಾ ಸಿಬ್ಬಂದಿಗಳಿಗೆ ಮಾಸಿಕ ಪ್ರೋತ್ಸಾಹ ಭತ್ಯೆ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
- ಆಧುನಿಕ ತಂತ್ರಜ್ಞಾನದ ಮೂಲಕ ವಾಹನಗಳಲ್ಲಿ ವೇಗ ಮಿತಿಯನ್ನು ನಿಗಧಿಪಡಿಸಲಾಗಿದೆ.
- ತಾಂತ್ರಿಕ ಸಿಬ್ಬಂದಿಗಳಿಗೆ ಆಗಿಂದಾಗ್ಗೆ ಸಂಸ್ಥೆಯ ವತಿಯಿಂದ/ ವಾಹನ ತಯಾರಕರಿಂದ ಹೊಸ ತಂತ್ರಜ್ಞಾನದ ಕುರಿತು ತರಬೇತಿ ನೀಡಲಾಗುತ್ತಿದೆ.